ಚುಕ್ಕೆ ಗುರುತಿಲ್ಲದ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	964
ಮಾನ್ಯ ಸದಸ್ಯರ ಹೆಸರು	ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ:	20.09.2021
ಉತ್ತರಿಸುವ ಸಚಿವರು:	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಬೀದರ್ ಜಿಲ್ಲೆಯಲ್ಲಿ ಕೋವಿಡ್ ಸೋಂಕಿನಿಂದ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು; (ವಿವರ ನೀಡುವುದು)	ಬೀದರ್ ಜಿಲ್ಲೆಯಲ್ಲಿ ಕೋವಿಡ್ ಸೋಂಕಿನಿಂದ ಸರ್ಕಾರಿ ಆಸ್ಪತ್ರೆಯಲ್ಲಿ ಒಟ್ಟು 391 ಜನರು ಹಾಗೂ ಖಾಸಗಿ ಆಸ್ಪತ್ರೆಯಲ್ಲಿ ಒಟ್ಟು 5 ಜನರು ಮೃತಪಟ್ಟಿರುವ ಪ್ರಕರಣಗಳು ವರದಿಯಾಗಿರುತ್ತವೆ.
ಆ	ಬೀದರ್ ಜಿಲ್ಲೆಯ ಕೋವಿಡ್ ಸೋಂಕಿನಿಂದ ಮೃತಪಟ್ಟವರ ಬಗ್ಗೆ ಗೊಂದಲವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೀದರ್ ಜಿಲ್ಲೆಯಲ್ಲಿ ಕೋವಿಡ್ ನೆಗೆಟಿವ್ ಇದ್ದರೂ ಸೋಂಕಿನ ಲಕ್ಷಣಗಳಿಂದ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಇದುವರೆವಿಗೂ ಯಾವುದೇ ಮರಣಗಳು ವರದಿಯಾಗಿರುವುದಿಲ್ಲ.
ಇ	ಬೀದರ್ ಜಿಲ್ಲೆಯಲ್ಲಿ ಕೋವಿಡ್ ನೆಗೆಟಿವ್ ಇದ್ದರು ಸೋಂಕಿನ ಲಕ್ಷಣಗಳಿಂದ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು; (ವಿವರ ನೀಡುವುದು)	
ಈ	ಕೋವಿಡ್ ಸೋಂಕಿನಿಂದ ಮೃತಪಟ್ಟವರ ಕುಟುಂಬಕ್ಕೆ ಸರ್ಕಾರದಿಂದ ಪರಿಹಾರ ಒದಗಿಸುವ ಯೋಜನೆ ಇದೆಯೇ?	ಕೋವಿಡ್-19 ವೈರಸ್ ಸೋಂಕಿನಿಂದಾಗಿ ದುಡಿಯುವ ಸದಸ್ಯರನ್ನು ಕಳೆದುಕೊಂಡಂತಹ ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕುಟುಂಬಕ್ಕೆ ರೂ.1.00 ಲಕ್ಷ ಗಳನ್ನು ಆರ್ಥಿಕ ನೆರವನ್ನು ನೀಡಲು ಸರ್ಕಾರದ ಆದೇಶ ಸಂಖ್ಯೆ:ಕಂಇ 294 ಟಿಎನ್ ಆರ್ 2021 , ದಿ:08.07.2021 ರಲ್ಲಿ ಅನುಮೋದನೆ ನೀಡಲಾಗಿದೆ.

ಆಕುಕ 129 ಎಸ್‌ಎಂಎಂ 2021

(ಡಾ||ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು